ಶರಣರು ಮತ್ತು ಹೋರಾಟಗಾರರ ಮನವಿಗಳು ಏನು ಇವೆ, ಆ ವಿಷಯಕ್ಕೆ ಸಂಬಂಧಪಟ್ಟಂಥ ಹೆಸರನ್ನು ಸರ್ಕಾರ ಘೋಷಣೆ ಮಾಡಬೇಕೆಂಬ ವಿನಂತಿಯನ್ನು ಮಾಡಬಯಸುತ್ತೇನೆ.

ಶ್ರೀ ಅರವಿಂದ ಲಿಂಬಾವಳಿ: ಮಾನ್ಯ ಅಧ್ಯಕ್ಷರೆ, ಸದಸ್ಯರಾದ ಮಾನ್ಯ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿಯವರು ಮತ್ತು ನಾನು ಬಿಜಾಪುರದ ವಿಶ್ವವಿದ್ಯಾಲಯದ ಪರಿಶೀಲನೆಗೆ ಹೋಗಿದ್ದೆವು. ಅಲ್ಲಿ ಸಾಕಷ್ಟು ಬೆಳವಣಿಗೆಗಳು, ಅಭಿವೃದ್ಧಿಗಳಾಗುವ ಅವಶ್ಯಕತೆ ಇದೆ. ಈಗ ತಾನೇ ಅಲ್ಲಿ ನಮಗೆ ಲ್ಯಾಂಡ್ ಸಿಕ್ಕಿರುವುದರಿಂದ ಅಭಿವೃದ್ಧಿಗೆ ಬೇಕಾಗಿರುವಂಥ ಹಣವನ್ನು ಮಾನ್ಯ ಮುಖ್ಯಮಂತ್ರಿಯವರು ಕೊಡುವುದಕ್ಕೆ ಪರಿಶೀಲಿಸುತ್ತಿದ್ದಾರೆ. ಅದನ್ನು ನಿಶ್ಚಿತವಾಗಿ ಆದರ್ಶ ವಿಶ್ವವಿದ್ಯಾಲಯವನ್ನಾಗಿ ಮಾಡಬೇಕೆಂದು ಮಾನ್ಯ ಮುಖ್ಯಮಂತ್ರಿಯವರ ಆಸೆ ಹಾಗೂ ನನ್ನ ಆಸೆ ಕೂಡ ಇರುವುದರಿಂದ, ಇದಕ್ಕೆ ನಿಶ್ಚಿತವಾಗಿ ಬೇಕಾಗಿರುವಂಥ ಹಣವನ್ನು ಒದಗಿಸಲಾಗುತ್ತದೆ. ಮಾನ್ಯ ಸದಸ್ಯರು ಕೊಟ್ಟ ಸಲಹೆಯಂತೆ ಹೆಸರನ್ನು ಇಡುವ ಬಗ್ಗೆ ತೀರ್ಮಾನವನ್ನು ಕೈಗೊಳ್ಳುತ್ತೇವೆ. ಈಗಾಗಲೆ ಮಾನ್ಯ ಮುಖ್ಯಮಂತ್ರಿಗಳು ತುಮಕೂರು ವಿಶ್ವವಿದ್ಯಾಲಯಕ್ಕೆ ಡಾ:ಶಿವಕುಮಾರಸ್ವಾಮಿಯವರ ಹೆಸರನ್ನು ಘೋಷಿಸಿದ್ದಾರೆ. ಉಳಿದ ವಿಶ್ವವಿದ್ಯಾಲಯಗಳ ಬಗ್ಗೆಯೂ ಕೂಡ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ಮಾಡಿ ಇದರ ಬಗ್ಗೆ ತೀರ್ಮಾನವನ್ನು ಕೈಗೊಳ್ಳುತ್ತೇವೆ.

ರಾಜೀವ್‌ಗಾಂಧಿ ವಿದ್ಯುದೀಕರಣ ಯೋಜನೆ ಬಗ್ಗೆ

33 (173) ಶ್ರೀ ಗೋಪಾಲಕೃಷ್ಣ ಬೇಳೂರು (ಸಾಗರ)
ಶ್ರೀ ಕೆ.ಎಸ್.ಈಶ್ವರಪ್ಪ (ಇಂಧನ ಸಚಿವರು)

ಅ) ಸಾಗರ ಹಾಗೂ ಹೊಸನಗರ ತಾಲ್ಲೂಕುಗಳಲ್ಲಿ ರಾಜೀವ್ ಗಾಂಧಿವಿದ್ಯುದೀಕರಣ ಯೋಜನೆ ಯಡಿಯಲ್ಲಿ ಸಲ್ಲಿಸಿರುವ ಅರ್ಜಿಗಳೆಷ್ಟು;

ರಾಜೀವಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ಸಾಗರ ಮತ್ತು ಹೊಸನಗರ ತಾಲ್ಲೂಕುಗಳಲ್ಲಿ ಅನುಕ್ರಮವಾಗಿ 4,807 ಹಾಗೂ 3,798

ಸಂಖ್ಯೆಯ ಗ್ರಾಮೀಣ ಮನೆಗಳಿಗೆ ವಿದ್ಯುಚ್ಛಕ್ತಿ ಸೌಲಭ್ಯ ಕಲ್ಪಿಸಲು ಪ್ರಸ್ತಾವಿಸಲಾಗಿದೆ. ಈ ಪ್ರಸ್ತಾವನೆಗೆ ಈಗ ಆರ್.ಇ.ಸಿ. ಮಂಜೂರಾತಿ ದೊರಕಿದೆ. ಇದರಲ್ಲಿ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸಂಬಂಧಪಟ್ಟ ಎಕ್ಸಿಕ್ಯುಟಿವ್ ಆಫೀಸರ್‌ಗಳು ಗುರುತಿಸಲ್ಪಟ್ಟ ಫಲಾನುಭವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ.

ಆ) ಈ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಎಷ್ಟು ವಿದ್ಯುಚ್ಛಕ್ತಿ ಸೌಲಭ್ಯ ಕಲ್ಪಿಸಲಾಗಿದೆ; ಎಷ್ಟು ಫಲಾನುಭವಿಗಳಿಗೆ ವಿದ್ಯುಚ್ಛಕ್ತಿ ಸೌಲಭ್ಯ ಕಲ್ಪಿಸಬೇಕಾಗಿದೆ;

ರಾಜೀವಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯ ಅನುಷ್ಠಾನಕ್ಕಾಗಿ ಈಗಾಗಲೇ ಟೆಂಡರ್ ಕರೆದಿದ್ದು, ದರಬಿಡ್ಡುಗಳನ್ನು ತೆರೆದಿದ್ದು, ಮೌಲ್ಯಮಾಪನವು ಸಂಪೂರ್ಣಗೊಂಡಿರುತ್ತದೆ. ಈ ಬಗ್ಗೆ ಆರ್.ಇ.ಸಿ/ಎಂ.ಒ.ಪಿ. ರವರಿಂದ ದಿನಾಂಕ: 19-02-2009 ರಂದು ಅನುಮೋದನೆ ದೊರೆತಿರುತ್ತದೆ. ಈ ಯೋಜನೆಯ ಅನುಷ್ಠಾನದೊಂದಿಗೆ ಸಾಗರ ಮತ್ತು ಹೊಸನಗರ ತಾಲ್ಲೂಕುಗಳಲ್ಲಿ ಅನುಕ್ರಮವಾಗಿ 4807 ಹಾಗೂ 3798 ಸಂಖ್ಯೆಯ ಗ್ರಾಮೀಣ ಮನೆಗಳಿಗೆ ವಿದ್ಯುಚ್ಛಕ್ತಿ ಸೌಲಭ್ಯ ಕಲ್ಪಿಸಲಾಗುವುದು.

ಇ) ಉಳಿದಿರುವ ಅರ್ಜಿದಾರರಿಗೆ ವಿದ್ಯುಚ್ಛಕ್ತಿ ಸೌಲಭ್ಯವನ್ನು ಕಲ್ಪಿಸಲು ಕಾಲಮಿತಿ ನಿಗದಿಪಡಿಸಲಾಗಿದೆಯೇ?

ಈ ಯೋಜನೆಯಂತೆ ಕಾಮಗಾರಿಯನ್ನು ಸಂಪೂರ್ಣಗೊಳಿಸಲು ಕಾಮಗಾರಿ ವಹಿಸಿದ ದಿನದಿಂದ ಒಟ್ಟು 18 ತಿಂಗಳುಗಳ ಕಾಲಮಿತಿಯನ್ನು ನಿಗದಿಪಡಿಸಲಾಗಿದೆ. ಅದಾಗ್ಯೂ, ಹೆಚ್ಚುವರಿ ಫಲಾನುಭವಿಗಳಿದ್ದಲ್ಲಿ ಅವರನ್ನೂ ಸಹ ಸೇರ್ಪಡೆಗೊಳಿಸಲಾಗುವುದು.

ಶ್ರೀ ಗೋಪಾಲಕೃಷ್ಣ ಬೇಳೂರು: ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಉತ್ತರವನ್ನು ಒದಗಿಸಿದ್ದಾರೆ. ರಾಜೀವ್‌ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಲ್ಲಿ ಸುಮಾರು ಎರಡು ವರ್ಷಗಳಿಂದ ನಮ್ಮ ಜಿಲ್ಲೆಯಲ್ಲಿ ಯಾವುದೇ ವಿದ್ಯುದೀಕರಣ ಆಗಿಲ್ಲ. ಈ ಸರಿ ಆರ್ಡರ್ ಆಗಿದೆ ಎಂದು ಮಾನ್ಯ ಸಚಿವರು ಹೇಳಿದ್ದಾರೆ. R.E.C.Schemeನಲ್ಲಿ ತಾವು ವಿದ್ಯುದೀಕರಣವನ್ನು ಕೊಟ್ಟಿದ್ದೀರಿ. ಬಹಳ ಸಂತೋಷ. ಆದರೆ, ನಮ್ಮ ತಾಲ್ಲೂಕಿನಲ್ಲಿ ಇನ್ನೂ ಸುಮಾರು 180-190 ಹಳ್ಳಿಗಳು ವಿದ್ಯುದೀಕರಣವಾಗಿಲ್ಲ ಎಂದು ಹೇಳಲು ಬಹಳ ಬೇಸರವಾಗುತ್ತದೆ. ಶರಾವತಿ ಡ್ಯಾಂ ಮತ್ತು ಲಿಂಗನಮಕ್ಕಿ ಡ್ಯಾಂಗಳನ್ನು ಕಟ್ಟುವಾಗ ಮುಳುಗಡೆಯಾದಂಥ ಪ್ರದೇಶಗಳ ಬಹಳಷ್ಟು ಜನರು ಅಲ್ಲಿದ್ದಾರೆ. ಹಿಂದೆ, ಬಹಳ ವರ್ಷ ಆಡಳಿತವನ್ನು ಮಾಡಿದಂಥ

ಸರ್ಕಾರದವರು ಅಲ್ಲಿಗೆ ವಿದ್ಯುತ್ ಕೊಡಲಿಕ್ಕೆ ಆಗಲಿಲ್ಲ. ಹಾಗಾಗಿ, ಇವತ್ತು ಇಂಧನ ಸಚಿವರು ನಮ್ಮ ಜಿಲ್ಲೆಯವರು ಆಗಿರುವುದರಿಂದ ಅವರಲ್ಲಿ ವಿನಂತಿ ಮಾಡಿಕೊಳ್ಳುತ್ತಿದ್ದೇನೆ, ಮಲೆನಾಡಿನಲ್ಲಿ ವಿದ್ಯುದೀಕರಣಕ್ಕೆ ಹೆಚ್ಚಿನ ಬೇಡಿಕೆ ಇರುವುದರಿಂದ ದಯವಿಟ್ಟು ವಿದ್ಯುದೀಕರಣಕ್ಕೆ ಹೆಚ್ಚಿನ ಆಸಕ್ತಿಯನ್ನು ವಹಿಸಬೇಕು ಮತ್ತು ವಿದ್ಯುದೀಕರಣವನ್ನು ಕೊಡಬೇಕೆಂದು ಕೇಳಿಕೊಳ್ಳುತ್ತಿದ್ದೇನೆ.

ಶ್ರೀ ಕೆ.ಎಸ್.ಈಶ್ವರಪ್ಪ: ನಿನ್ನೆ ತಾನೆ ಕೇಂದ್ರ ಸರ್ಕಾರದಿಂದ ಆರ್ಡರ್ ಬಂದಿದೆ. ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣದ ಯೋಜನೆಯಡಿಯಲ್ಲಿ ಶಿವಮೊಗ್ಗ ಜಿಲ್ಲೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಒಟ್ಟು 85 ಕೋಟಿ ರೂಪಾಯಿಗಳಷ್ಟು ಮಂಜೂರಾತಿಯಾಗಿ ಬಂದಿದೆ. ಇದರಲ್ಲಿ ಶಿವಮೊಗ್ಗ ಜಿಲ್ಲೆಯ 1,440 ಹಳ್ಳಿಗಳು, ಚಿಕ್ಕಮಗಳೂರು ಜಿಲ್ಲೆಯ 1,033 ಹಳ್ಳಿಗಳು ಸೇರಿವೆ. ಮಂಜೂರಾಗಿರುವ ಹಣದಲ್ಲಿ ಶಿವಮೊಗ್ಗ ಜಿಲ್ಲೆಗೆ 42.73 ಕೋಟಿ ರೂಪಾಯಿಗಳು ಮತ್ತು ಚಿಕ್ಕಮಗಳೂರು ಜಿಲ್ಲೆಗೆ 42.30 ಕೋಟಿ ರೂಪಾಯಿಗಳಷ್ಟಿದೆ. ಸಾಗರದ ಬಗ್ಗೆ ಮಾನ್ಯ ಶಾಸಕರು ಕೇಳುತ್ತಿದ್ದಾರೆ, ರಾಜೀವ್‌ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ಸಾಗರ ಮತ್ತು ಹೊಸನಗರ ತಾಲ್ಲೂಕುಗಳಲ್ಲಿ ಅನುಕ್ರಮವಾಗಿ 4,807 ಹಾಗೂ 3,798 ಸಂಖ್ಯೆಯ ಗ್ರಾಮೀಣ ಮನೆಗಳಿಗೆ ವಿದ್ಯುಚ್ಛಕ್ತಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ. ಈಗಾಗಲೆ ಇದಕ್ಕೆ ಕೇಂದ್ರ ಸರ್ಕಾರದಿಂದ ಮಂಜೂರಾತಿ ಬಂದಿರುವುದರಿಂದ 18 ತಿಂಗಳುಗಳಲ್ಲಿ ಈ ಯೋಜನೆಯನ್ನು ಮುಗಿಸಿಕೊಡುತ್ತೇವೆ.

ಶ್ರೀ ಯು.ಟಿ.ಖಾದರ್: ಮಾನ್ಯ ಅಧ್ಯಕ್ಷರೆ, ಮಂಗಳೂರು ಜಿಲ್ಲೆಯಲ್ಲಿ ಕೂಡ ಈ proprosal ಇತ್ತು.

ಅಧ್ಯಕ್ಷರು: ಸಾಗರ ಮತ್ತು ಹೊಸನಗರಗಳಿಗೆ ಸೀಮಿತವಾದಂತೆ ಅವರು ಪ್ರಶ್ನೆಯನ್ನು ಕೇಳಿದ್ದಾರೆ. I will not allow you.

ಶ್ರೀ ಬಿ.ರಮಾನಾಥ ರೈ: ದಕ್ಷಿಣ ಕನ್ನಡ ಜಿಲ್ಲೆಯನ್ನು ರದ್ದು ಮಾಡಿ ಶಿವಮೊಗ್ಗ ಜಿಲ್ಲೆಯನ್ನು ಸೇರಿಸಿದ್ದಾರೆ. ಇದು ಸರಿಯಲ್ಲ. ರಾಜೀವ್‌ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆ ಸೇರ್ಪಡೆಯಾಗಿತ್ತು. ದಕ್ಷಿಣ ಕನ್ನಡ ಜಿಲ್ಲೆಯನ್ನು ರದ್ದು ಮಾಡಿ ಶಿವಮೊಗ್ಗವನ್ನು ಹಾಕಿದ್ದಾರೆ. ಇದರ ಬಗ್ಗೆ ತಿಳುವಳಿಕೆ ಕೊಡಬೇಕು.

ಶ್ರೀ ಕೆ.ಎಸ್.ಈಶ್ವರಪ್ಪ: ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನೂ ಸೇರಿಸಿ ನಾವು ಕೇಂದ್ರ ಸರ್ಕಾರಕ್ಕೆ ಕಳುಹಿಸಿದ್ದೆವು. ಕೇಂದ್ರ ಸರ್ಕಾರದಿಂದ ಅದು ಅನುಮೋದನೆಯಾಗಿ ಬಂದಿಲ್ಲ. ಈಗ ಕೇಂದ್ರ ಸರ್ಕಾರದಿಂದ ಮಂಜೂರಾಗಿ ಬಂದಿರುವುದು ಶಿವಮೊಗ್ಗ ಜಿಲ್ಲೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳಿಗೆ ಮಾತ್ರ.

ಉಡುಪಿ, ಮಂಗಳೂರು ಮತ್ತು ಉಳಿದ ಜಿಲ್ಲೆಗಳದ್ದನ್ನೂ ಕೂಡ ನಾವು ಮತ್ತೆ ಮುಂದುವರೆಸುತ್ತೇವೆ, ಅದನ್ನು ಬಿಡುವುದಿಲ್ಲ. ನಾವು ಕೇಂದ್ರ ಸರ್ಕಾರಕ್ಕೆ ಬೆನ್ನು ಹತ್ತುತ್ತೇವೆ. ಆ ಜಿಲ್ಲೆಗಳಿಗೂ ಕೊಡುವ ದಿಕ್ಕಿನಲ್ಲಿ ನಾವು ಪ್ರಯತ್ನವನ್ನು ನಡೆಸುತ್ತೇವೆ.

ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ನೇಮಕಾತಿ ಕುರಿತು.

34 (76) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರ್ ರಾವ್ ನಾಡಗೌಡ (ಮಂದ್ದೇ ಬಿಹಾಳ)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು);

ಪ್ರಾಥಮಿಕ ಶಿಕ್ಷಣ:–

ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ರಾಜ್ಯ ವಲಯದ 3763 ಮತ್ತು ಸರ್ವ ಶಿಕ್ಷಣ ಅಭಿಯಾನದಿಂದ 2008–09ನೇ ಸಾಲಿಗೆ ಮಂಜೂರಾದ 1165 ಹುದ್ದೆಗಳು ಸೇರಿದಂತೆ ಒಟ್ಟು 4928 ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತದೆ. ಜಿಲ್ಲಾವಾರು ವಿವರವನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಪ್ರೌಢ ಶಿಕ್ಷಣ:– ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಸಹ ಶಿಕ್ಷಕರು 1678 ಹಾಗೂ ಸಂಗೀತ ಶಿಕ್ಷಕರು 240 ಸೇರಿದಂತೆ ಒಟ್ಟು 1918 ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತದೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ–2ರಲ್ಲಿ ನೀಡಲಾಗಿದೆ.

ಆ) ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಖಾಲಿ ಇರುವ ಸದರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ. ಅನುಮತಿ ದೊರೆತ ಕೂಡಲೇ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗುವುದು. ಹಾಗಿದ್ದಾಗ್ಯೂ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಟಿಯಿಂದ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದೆ.